# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 30.12.2010

## *ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ*

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸರ್ವಜ್ಞನಗರ ವಿಭಾಗದಲ್ಲಿ ದಿನಾಂಕ: 01.01.2011 ರಂದು ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.59, ಮಾರುತಿ ಸೇವಾನಗರ ವಾರ್ಡ್‌ನಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಕಾಮಗಾರಿ ಇಲಾಖೆಯ ಎಲ್ಲಾ ಅಭಿಯಂತರರು, ಕೆಲಸ ಪರಿವೀಕ್ಷಕರು, ಗ್ಯಾಂಗ್‌ಮೆನ್, ಪರಿಸರ ಇಲಾಖೆಯ ಅಭಿಯಂತರರು ಹಾಗೂ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಕರು, ಪೌರಕಾರ್ಮಿಕರುಗಳು ಭಾಗವಹಿಸಲಿದ್ದಾರೆ ಎಂದು ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ವಿಭಾಗ ರವರು ತಿಳಿಸಿದ್ದಾರೆ.

ಪಾಲಿಕೆಯ ಪುಲಿಕೇಶಿನಗರ ವಿಭಾಗದಲ್ಲಿ ದಿನಾಂಕ: 01.01.2011 ರಂದು ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದ ವಾರ್ಡ್ ನಂ.78ರ ಪುಲಿಕೇಶಿನಗರ, ಕೋಲ್ಸ್ ರಸ್ತೆಯ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಂಬಂಧ ಕಾಮಗಾರಿ ಇಲಾಖೆಯ ಎಲ್ಲಾ ಅಭಿಯಂತರರು, ಕೆಲಸ ಪರಿವೀಕ್ಷಕರು, ಗ್ಯಾಂಗ್‌ಮನ್, ಪರಿಸರ ಇಲಾಖೆಯ ಅಭಿಯಂತರರು ಹಾಗೂ ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಕರು, ಪೌರಕಾರ್ಮಿಕರುಗಳು ಭಾಗವಹಿಸಲಿದ್ದಾರೆ ಎಂದು ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**